ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE :

## ಲೋಕಸಭೆ ಸಮನ್ಸ್‌ಗೆ ಸುಪ್ರೀಂ ಕೋರ್ಟ್ ತಡೆ

**ಹೊಸದಿಲ್ಲಿ:** ಲೋಕಸಭೆ ಸಚಿವಾಲಯದ ಹಕ್ಕು ಬಾಧ್ಯತಾ ಸಮಿತಿಯು ಜಾರ್ಖಂಡ್‌ನ ಡಿಯೋಗಢ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ನೀಡಿದ್ದ ಸಮನ್ಸ್‌ಗೆ ಸುಪ್ರೀಂ ಕೋರ್ಟ್ ಸೋಮವಾರ ತಡೆ ನೀಡಿದೆ. ಜಾರ್ಖಂಡ್‌ನ ಗೊಡ್ಡಾ ಕ್ಷೇತ್ರದ ಬಿಜೆಪಿ ಸಂಸದ ನಿಶಿಕಾಂತ್ ದುಬೆ ನೀಡಿದ ದೂರಿನ ಮೇರೆಗೆ ಮಂಗಳವಾರ ವಿಚಾರಣೆಗೆ ಹಾಜರಾಗುವಂತೆ ಪೊಲೀಸ್ ಅಧಿಕಾರಿಗೆ ಲೋಕಸಭಾ ಹಕ್ಕು ಬಾಧ್ಯತಾ ಸಮಿತಿ ಸಮನ್ಸ್ ಜಾರಿ ಮಾಡಿತ್ತು. ಕ್ರಿಮಿನಲ್ ಪ್ರಕರಣವೊಂದರಲ್ಲಿ ತಮ್ಮನ್ನು ಹಾಗೂ ತಮ್ಮ ಕುಟುಂಬವನ್ನು ಸಿಲುಕಿಸಲು ಷಡ್ಯಂತ್ರ ರೂಪಿಸಿ, ತಮ್ಮ ರಾಜಕೀಯ ವೃತ್ತಿಗೆ ಕಳಂಕ ತರಲು ಜಾರ್ಖಂಡ್‌ನ ಜೆಎಂಎಂ ಸರಕಾರದ ಹಲವು ಅಧಿಕಾರಿಗಳು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿ ದುಬೆ ಲೋಕಸಭೆ ಸಚಿವಾಲಯಕ್ಕೆ ದೂರು ನೀಡಿದ್ದರು.